## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 878 (1019) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 14.12.2023 |
| ಉತ್ತರಿಸಬೇಕಾದ ಸಚಿವರು | : ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗದಗ, ಧಾರವಾಡ ಮತ್ತು ಬೆಳಗಾವಿಗೆ ಕುಡಿಯವ ನೀರು ಒದಗಿಸುವ ನಿರೀಕ್ಷೆಯಿರುವ ಮತ್ತು ಕಳೆದ ಹಲವಾರು ವರ್ಷಗಳಿಂದ ಬಾಕಿಯಿರುವ ಮಹದಾಯಿ ಯೋಜನೆ ಅನುಷ್ಠಾನ ಪೂರ್ಣಗೊಳ್ಳುವುದು ಯಾವಾಗ: | ಕಳಸಾ ಬಂಡೂರಿ ನಾಲಾ ಯೋಜನೆಗೆ ಸಂಬಂಧಿಸಿದಂತೆ, ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆದ ನಂತರ ಅನುದಾನ ಲಭ್ಯತೆಯನುಸಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುವುದು. |
| (ಆ) | ಈ ಯೋಜನೆಗಳ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಸವಿಸ್ತಾರವಾಗಿ ವಿವರ ನೀಡುವುದು; | ಕಳಸಾ ಬಂಡೂರಿ ನಾಲಾ ಯೋಜನೆಗೆ ಸಂಬಂಧಿಸಿದಂತೆ, ಅಂತಿಮ ತೀರ್ಪನ್ನು ಕೇಂದ್ರ ಸರ್ಕಾರವು ತನ್ನ ವಿಶೇಷ ಗೆಜೆಟ್ ಅಧಿಸೂಚನೆಯಡಿ ದಿನಾಂಕ: 27.02.2020ರಂದು ಹೊರಡಿಸಿರುತ್ತದೆ. ಕೇಂದ್ರ ಜಲ ಆಯೋಗದಿಂದ ದಿನಾಂಕ: 29.12.2022 ರಂದು ವಿವರವಾದ ಯೋಜನಾ ವರದಿಗಳಿಗೆ ಅನುಮೋದನೆ ಪಡೆಯಲಾಗಿದೆ.<br>ಸದರಿ ಯೋಜನೆಯಡಿ ಬರುವ ಕಳಸಾ ನಾಲಾ ತಿರುವು ಯೋಜನೆ (ಲಿಫ್ಟ್ ಯೋಜನೆ) ರೂ.995.30 ಕೋಟಿಗಳ ವಿವರವಾದ ಯೋಜನಾ ವರದಿಗೆ ಹಾಗೂ ಬಂಡೂರಾ ನಾಲಾ ಯೋಜನೆ (ಲಿಫ್ಟ್ ಯೋಜನೆ)ಯ ರೂ.764.70 ಕೋಟಿಗಳ ವಿವರವಾದ ಯೋಜನಾ ವರದಿಗೆ ದಿನಾಂಕ: 27.03.2023ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ.<br>ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಪರಿಸರ, ಅರಣ್ಯ ಮತ್ತು ವನ್ಯಜೀವಿ ಮುಂತಾದ ಅಗತ್ಯ ಶಾಸನಬದ್ಧ ತೀರುವಳಿಗಳನ್ನು ಪಡೆಯಲು ಕ್ರಮ ವಹಿಸಲಾಗುತ್ತಿದೆ. |
| (ಇ) | ಈ ಯೋಜನೆಗಳಿಗೆ ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು ಮತ್ತು ಖರ್ಚು ಮಾಡಿರುವ ಹಣವೆಷ್ಟು; | 2023-24ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ನೀರಾವರಿ ನಿಗಮಕ್ಕೆ ಹಂಚಿಕೆ ಮಾಡಲಾದ ಅನುದಾನದಲ್ಲಿ, ಕಳಸಾ-ಬಂಡೂರಿ ನಾಲಾ ಯೋಜನೆಗಳಿಗೆ ರೂ.500.00 ಕೋಟಿ ಅನುದಾನ ಮೀಸಲಿಡಲಾಗಿದೆ. |
| (ಈ) | ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಇರುವ ಕಾನೂನು ತೊಡಕುಗಳೇನು: | ಮಹದಾಯಿ ಜಲ ವಿವಾದ ನ್ಯಾಯಾಧೀಕರಣದ ತೀರ್ಪಿನ ವಿರುದ್ಧ ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ರಾಜ್ಯಗಳು ಸರ್ವೋಚ್ಚ ನ್ಯಾಯಾಲಯದಲ್ಲಿ ವಿಶೇಷ ಮೇಲ್ಮನವಿ ಅರ್ಜಿಗಳನ್ನು ಸಲ್ಲಿಸಿದ್ದು, ಸದರಿ ಅರ್ಜಿಗಳು ಇತ್ಯರ್ಥವಾಗಬೇಕಾಗಿದ್ದು, ಎಲ್ಲಾ ಅಗತ್ಯ ಆಡಳಿತಾತ್ಮಕ ಮತ್ತು ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| (ಉ) | ಈ ಯೋಜನೆಗಳ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ಅನುಮತಿಯನ್ನು ನೀಡಿದೆಯೇ? | ಕೇಂದ್ರ ಜಲ ಆಯೋಗದಿಂದ ದಿನಾಂಕ: 29.12.2022 ರಂದು ವಿವರವಾದ ಯೋಜನಾ ವರದಿಗಳಿಗೆ ಅನುಮೋದನೆ ಪಡೆಯಲಾಗಿದೆ. |

ಸಂಖ್ಯೆ: ಜಸಂಇ 132 ಡಬ್ಲ್ಯೂಬಿಎಂ 2023

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿಗಳು